"ಕೀ ಉತ್ತರಗಳಿಗೆ ಆಕ್ಷೇಪಣೆಗಳನ್ನು ಪರೀಕ್ಷಾ ನಿಯಂತ್ರಕರು, ಕರ್ನಾಟಕ ಲೋಕ ಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು-560001 ಇವರಿಗೆ ದಿನಾಂಕ: 18-05-2017ರಂದು ಕಛೇರಿಯ ಕಾರ್ಯದ ವೇಳೆಯೊಳಗಾಗಿ ತಲುಪುವಂತೆ ಈ ವಿಳಾಸಕ್ಕೆ ಮಾತ್ರ ಕಳುಹಿಸಿಕೊಡಬೇಕು. ಆಕ್ಷೇಪಣೆಗಳನ್ನು ಸ್ವೀಕರಿಸುವ ಕೊನೆಯ ದಿನಾಂಕ: 18-05-**2017** ಮತ್ತು ಈ ಅವಧಿಯ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ತಿರಸ್ಕರಿಸಲಾಗುವುದು."

ಅ) ಆಕ್ಷೇಪಣೆಗಳ ವಿವರಗಳನ್ನು ಕಡ್ಡಾಯವಾಗಿ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ನಮೂನೆಯಲ್ಲಿಯೇ (ಕನ್ನಡ ಅಥವಾ ಇಂಗ್ಲೀಷ್) ಸಲ್ಲಿಸಬೇಕು ಹಾಗೂ ಇದರೊಂದಿಗೆ ಪ್ರತಿ ಪ್ರಶ್ನೆಗೆ ರೂ.50/-ರಂತೆ ಶುಲ್ಕವನ್ನು (ಐ.ಪಿ.ಓ ಅಥವಾ ಡಿ.ಡಿ. ಮೂಲಕ) ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು, ಇವರ ಹೆಸರಿಗೆ ಸಂದಾಯ ಮಾಡಬೇಕು. ಶುಲ್ಕ ಸಂದಾಯ ಮಾಡದ ಆಕ್ಷೇಪಣಾ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಆ) ಅಭ್ಯರ್ಥಿಗಳ ಆಕ್ಷೇಪಣೆಗಳನ್ನು ವಿಷಯ ತಜ್ಞರು ಪರಿಶೀಲಿಸಿದ ನಂತರ, ಆಕ್ಷೇಪಣೆಯು ಕ್ರಮಬದ್ಧವಾಗಿದೆ ಎಂದು ಕಂಡುಬಂದಲ್ಲಿ ಆ ಪ್ರಶ್ನೆಗೆ ಸಂಬಂಧಿಸಿದಂತೆ ಅಭ್ಯರ್ಥಿಯು ಪಾವತಿಸಿರುವ ಶುಲ್ಕವನ್ನು ಮರುಪಾವತಿಸಲಾಗುವುದು. ಸ್ವೀಕೃತವಾದ ಆಕ್ಷೇಪಣೆಯಲ್ಲಿ ಯಾವುದೇ ಹುರುಳಿಲ್ಲವೆಂದು ಕಂಡು ಬಂದ ಸಂದರ್ಭದಲ್ಲಿ ಅಭ್ಯರ್ಥಿಯಿಂದ ವಸೂಲಾದ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ.

ಇ) ಪ್ರತಿ ಪ್ರಶ್ನೆಯ ಕೀ ಉತ್ತರಕ್ಕೆ ಸಲ್ಲಿಸುವ ಆಕ್ಷೇಪಣೆಗಳಿಗೆ ಪೂರಕವಾಗಿ ದ್ವಿಪ್ರತಿಯಲ್ಲಿ ಸಲ್ಲಿಸುವ ದಾಖಲೆಗಳಿಗೆ ಸಂಬಂಧಿಸಿದಂತೆ ಲೇಖಕರ ಹೆಸರು, ಪ್ರಕಾಶನದ ಪ್ರತಿ ಇತ್ಯಾದಿ ವಿವರಗಳನ್ನು ಆಕ್ಷೇಪಣೆಗಳೊಂದಿಗೆ ನಮೂನೆಯಲ್ಲಿ ನಮೂದಿಸಬೇಕು ಮತ್ತು ದಾಖಲೆಗಳ ಪ್ರತಿ ಪುಟದ ಮೇಲೆ ಪ್ರಶ್ನೆ ಸಂಖ್ಯೆ ಮತ್ತು ನೋಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ ಬರೆಯಬೇಕು ಹಾಗೂ ದಾಖಲೆಗಳನ್ನು ದ್ವಿಪ್ರತಿಯಲ್ಲಿ ಹಾಗೂ ನಿಗದಿತ ನಮೂನೆಯಲ್ಲಿ ಸಲ್ಲಿಸದ ಆಕ್ಷೇಪಣೆಗಳನ್ನು ತಿರಸ್ಕರಿಸಲಾಗುವುದು.

ಈ) ಆಕ್ಷೇಪಣೆಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಕೀ ಉತ್ತರಗಳನ್ನು ವೆಬ್‌ಸೈಟ್‌ನಿಂದ ತೆಗೆಯಲಾಗುವುದು. ಆನಂತರ ಯಾವುದೇ ಕಾರಣಕ್ಕೂ ಅಭ್ಯರ್ಥಿಗಳಿಗೆ ಕೀ ಉತ್ತರಗಳನ್ನು ನೀಡಲಾಗುವುದಿಲ್ಲ ಮತ್ತು ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.